ಭಾಲ್ಕಿಯಲ್ಲಿ ಐ.ಟಿ.ಐ. ಪ್ರಾರಂಭಿಸುವ ಬಗ್ಗೆ

392 (727) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಹೊಸದಾಗಿ ಕೈಗಾರಿಕಾ ತರಬೇತಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು;

ಆ) ರಾಜ್ಯದಲ್ಲಿ ಅತ್ಯಂತ ಹಿಂದುಳಿದ ಪ್ರದೇಶ ಹಾಗೂ ಗಡಿ ಭಾಗದಲ್ಲಿ ಭಾಲ್ಕಿಯಲ್ಲಿ ಐಟಿಐಯನ್ನು ಪ್ರಾರಂಭಿಸಲಾಗಿದೆಯೇ;

ಇ) ಇಲ್ಲದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಐಟಿಐಗಳನ್ನು ಪ್ರಾರಂಭಿಸುವ ಸಂದರ್ಭದಲ್ಲಿ ಭಾಲ್ಕಿಯಲ್ಲಿಯೂ ಸಹ ಐಟಿಐಯನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಇಲ್ಲದಿದ್ದಲ್ಲಿ, ಕಾರಣಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು) :

ಅ) ಈ ಬಗ್ಗೆ ಇನ್ನೂ ತೀರ್ಮಾನಿಸಿರುವುದಿಲ್ಲ.

ಆ) ಇಲ್ಲ.

ಇ) ಪರಿಶೀಲಿಸಲಾಗುವುದು.

ಈ) ಉದ್ಭವಿಸುವುದಿಲ್ಲ.

ಬಿ.ಸಿ.ಎಂ. ಇಲಾಖೆಯಿಂದ ಶುಲ್ಕ ರಿಯಾಯಿತಿ ಹಣ ಬಿಡುಗಡೆ ಮಾಡದೇ ಇರುವುದು

393 (728) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಬಿ.ಸಿ.ಎಂ. ಇಲಾಖೆಯಿಂದ ಎಷ್ಟು ಹಣವನ್ನು ವಿದ್ಯಾರ್ಥಿಗಳ ಶುಲ್ಕ ರಿಯಾಯಿತಿ (ಫೀ ಕನ್ಸೆಷನ್)ಗಾಗಿ ಬಿಡುಗಡೆ ಮಾಡಲಾಗಿದೆ. (ಪೂರ್ಣ ವಿವರಗಳನ್ನು ಕಾಲೇಜುವಾರು ಅಂಕಿ ಅಂಶಗಳಲ್ಲಿ ಒದಗಿಸುವುದು);

ಆ) ಇದೇ ಅವಧಿಯಲ್ಲಿ ಶುಲ್ಕ ವಿನಾಯಿತಿ ಕೋರಿ ಇಲಾಖೆಗೆ ಎಷ್ಟು ಅರ್ಜಿಗಳು ಬಂದಿರುತ್ತವೆ;